# ವಾರ್ಡ್ ಸಭೆ ಸಂಖ್ಯೆ.33

ದಿನಾಂಕ:07.05.2022 ರಂದು ಸಮಯ 11:00 ಗಂಟೆಗೆ ವಾರ್ಡ್.ಸಂಖ್ಯೆ.44 ಮಾರಪ್ಪನಪಾಳ್ಯ ವಾರ್ಡ್ ಕಛೇರಿಯಲ್ಲಿ ವಾರ್ಡ್ ಕಮಿಟಿ ಸಭೆಯನ್ನು ಕಾರ್ಯದರ್ಶಿ ರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿತ್ತು.

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳು

1. ಶ್ರೀ ಧನಂಜಯ ಜಿ.ಟಿ ಸಹಾಯಕ ಅಭಿಯಂತರರು, ವಾರ್ಡ್.ಸಂಖ್ಯೆ.44, ಮಾರಪ್ಪನಪಾಳ್ಯ. (**ಕಾರ್ಯದರ್ಶಿ**)
2. ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು.
3. ಶ್ರೀ ಬಿ.ಆರ್ ಪುಟ್ಟಸ್ವಾಮಿ ಸದಸ್ಯರು.
4. ಶ್ರೀ ನಾಗೇಂದ್ರ ಸದಸ್ಯರು.
5. ಶ್ರೀ ಶಶಿಕುಮಾರ್ ಎಸ್.ಆರ್ ಆರೋಗ್ಯ ವೈಧ್ಯಾಧಿಕಾರಿಗಳು ಶಂಕರನಗರ ಪ್ರಾಥಮಿಕ ಆರೋಗ್ಯ ಕೇಂದ್ರ.
6. ಶ್ರೀ ಪ್ರದೀಪ್‌ಕುಮಾರ್ ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
7. ಶ್ರೀ ಛಾಯಪತಿ ಎಂ ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
8. ಶ್ರೀ ಜಿ.ಕೆ ವೆಂಕಟೇಶಯ್ಯ, ಕೆಲಸ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
9. ಶ್ರೀ ದಿನೇಶ್ ಕುಮಾರ್ ಸಹಾಯಕ ಅಭಿಯಂತರರು (ಬೆಸ್ಕಾಂ) ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
10. ಶ್ರೀ ಲೋಕೇಶ್, ಪಶು ಸಂಗೋಪನ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
11. ಶ್ರೀ ಮಹದೇವಾ ಬೀದಿ ದೀಪ ಗುತ್ತಿಗೆದಾರರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
12. ಶ್ರೀ ನಿಂಗರಾಜು ಎನ್, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.
13. ಶ್ರೀ ಎಂ.ವಿ ಶ್ರೀನಿವಾಸ, ಯಶವಂತಪುರ ಸಂಚಾರಿ ಪೋಲೀಸ್ ಠಾಣೆ
14. ಶ್ರೀ ರಂಜಿತ್ ಮಾರ್ಷಲ್ ವಾರ್ಡ್ ಸಂಖ್ಯೆ.44, ಮಾರಪ್ಪನಪಾಳ್ಯ.

ಶ್ರೀ ಧನಂಜಯ ಜಿ.ಟಿ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಸದಸ್ಯರನ್ನು, ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸಲಾಯಿತು.

| ಕ್ರ. ಸಂ | ವಿವರಣೆ | ಕ್ರಮ |
|---|---|---|
| 1. | ಕಾರ್ಯದರ್ಶಿಗಳು ಹಿಂದಿನ ಸಭೆಯ ನಡವಳಿಗಳನ್ನು ಸಭೆಯಲ್ಲಿ ಹಾಜರಿದ್ದ ಸದಸ್ಯರಿಗೆ, ಅಧಿಕಾರಿಗಳಿಗೆ ಓದಿ ತಿಳಿಸಿದರು. | - |
| 2. | ಕಾರ್ಯದರ್ಶಿಗಳು ಸಾರ್ವಜನಿಕರ ಸಮಸ್ಯೆಗಳಿಗೆ ಮೊದಲ ಆದ್ಯತೆ ನೀಡಿ ಸಮಸ್ಯೆಯನ್ನು ತಿಳಿಸುವಂತೆ ಸಾರ್ವಜನಿಕರನ್ನು ಕೋರಿದರು. | - |
| 3. | ಶ್ರೀ ನಾಗೇಂದ್ರ ಸದಸ್ಯರು ರವರು ಕಣ್ಣ ಆಸ್ಪತ್ರೆ ರಸ್ತೆಯ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಸರಿಪಡಿಸಿ ಎಂದು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸೂಚಿಸಿದರು. | ಬೀದಿ ದೀಪ ಇಲಾಖೆ |
| 4. | ಶ್ರೀ ಪುಟ್ಟಸ್ವಾಮಿ ಮತ್ತು ನಾಗೇಂದ್ರ ಸದಸ್ಯರು ರವರು ಚಿಕ್ಕೇ ಗೌಡ ಚೌಟ್ರಿ, ಈಶ್ವರ ದೇವಸ್ಥಾನದ ಮತ್ತು ರಕ್ಷ ಆಸ್ಪತ್ರೆ ಹತ್ತಿರದ ಬ್ಲಾಕ್ ಸ್ಪಾಟ್‌ಗಳನ್ನು ತೆರವುಗೊಳಿಸಿರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಮಾರ್ಷಲ್ ಮತ್ತು ಕಿರಿಯ ಆರೋಗ್ಯ ಪರಿವೀಕ್ಷರು ರವರು ಕಸ ಹಾಕುವವರಿಗೆ ದಂಡ ವಿಧಿಸಲಾಗುತ್ತಿದೆ ಎಂದು ತಿಳಿಸಿದರು. | ಘನತ್ಯಾಜ್ಯ ಇಲಾಖೆ |
| 5. | ಶ್ರೀ ನಾಗೇಂದ್ರ ಸದಸ್ಯರು ರವರು ಅಶೋಕ ಹೈಟ್ಸ್ ಹತ್ತಿರ ಇರುವ ತೆಂಗಿನ ಚಿಪ್ಪುಗಳನ್ನು ತೆರವುಗೊಳಿಸಲು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ನೋಟೀಸ್ ನೀಡುವಂತೆ ಸೂಚಿಸಿದರು. | ಘನತ್ಯಾಜ್ಯ ಇಲಾಖೆ |
| 6. | ಶ್ರೀ ನಾಗೇಂದ್ರ ಸದಸ್ಯರು ರವರು ಐ ಮಾಸ್ಟ್‌ಗಳ ರಿಪೇರಿ ಬಗ್ಗೆ ಮಾಹಿತಿ ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ದೂರವಾಣಿ ಕರೆ ಮಾಡಿ ವಾರ್ಡ್ ವ್ಯಾಪ್ತಿಯಲ್ಲಿ 6 ಐ-ಮಾಸ್ಟ್‌ಗಳನ್ನು ಸರಿಪಡಿಸಿರುತ್ತೀರಿ ಉಳಿಕೆ 10 ಐ-ಮಾಸ್ಟ್‌ಗಳನ್ನು ಮುಂದಿನ ಸಭೆಯೊಳಗೆ ಸರಿಪಡಿಸಸವಂತೆ ಕೋರಿದರು. | ಬೀದಿ ದೀಪ ಇಲಾಖೆ |
| 7. | ಶ್ರೀ ನಾಗೇಂದ್ರ ಸದಸ್ಯರು ರವರು ಶಂಕರನಗರ ಆರೋಗ್ಯ ಕೇಂದ್ರದಿಂದ ಚಿಕ್ಕಗೌಡ ಕಲ್ಯಾಣ ಮಂಟಪದವರೆಗೆ ಫಾಗಿಂಗ್ ಮಾಡಿಸಲು ಕೋರಿದರು. ಇದಕ್ಕೆ ಹಿರಿಯ ಆರೋಗ್ಯ ಪರಿವೀಕ್ಷಕರು ಫಾಗಿಂಗ್ ಮಾಡಿಸುತ್ತೇನೆ ಎಂದು ತಿಳಿಸಿದರು. | ಹಿರಿಯ ಆರೋಗ್ಯ ಪರಿವೀಕ್ಷಕರು |
| 8. | ಶ್ರೀ ನಾಗೇಂದ್ರ ಸದಸ್ಯರು ರವರು ಶಂಕರನಗರ ಮುಖ್ಯರಸ್ತೆಯಲ್ಲಿ ಜೋತು ಬಿದ್ದ ಕೇಬಲ್‌ಗಳನ್ನು ತೆರವುಗೊಳಿಸಲು ಕೋರಿದರು. ಇದಕ್ಕೆ ವಾರ್ಡ್ ಅಭಿಯಂತರರು ಬೆಸ್ಕಾಂ ಇಲಾಖೆ ರವರಿಗೆ ನಮ್ಮ ಇಲಾಖೆ ವತಿಯಿಂದ ಮತ್ತು ನಿಮ್ಮ ಇಲಾಖೆಯವರು ಸೇರಿ ತೆರವುಗೊಳಿಸೋಣ ಎಂದು ತಿಳಿಸಿದರು. | ಬೆಸ್ಕಾಂ ಇಲಾಖೆ, ಕಾಮಗಾರಿ ಇಲಾಖೆ |

Scanned with CamScanner

| | | |
|---|---|---|
| 9. | ಶ್ರೀ ನಾಗೇಂದ್ರ ಸದಸ್ಯರು ರವರು ವಾರ್ಡ್ ವ್ಯಾಪ್ತಿಯಲ್ಲಿ ಬೋರ್‌ವೆಲ್ ಪ್ಯನಲ್ ಬೋರ್ಡ್‌ಗಳನ್ನು ರಿಪೇರಿ ಮಾಡಿರುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ವಾರ್ಡ್ ಅಭಿಯಂತರರು ಸದರಿ ಕಾಮಗಾರಿಗೆ ಟೆಂಡರ್ ಕರೆಯಲಾಗಿದ್ದು, ಗುತ್ತಿಗೆದಾರರು ನಿಗದಿಪಡಿಸಿದ ನಂತರ ಕಾಮಗಾರಿಯನ್ನು ನಿರ್ವಹಿಸಲಾಗುವುದು ಎಂದು ತಿಳಿಸಿದರು. | ಕಾಮಗಾರಿ ಇಲಾಖೆ |
| 10. | ಎಲ್ಲಾ ಸದಸ್ಯರು ಶಂಕರನಗರ ಮುಖ್ಯರಸ್ತೆಯನ್ನು ತರಕಾರಿ ಮಾರುಕಟ್ಟೆ ಮಾಡಿಕೊಂಡಿರುತ್ತಾರೆ, ಸದರಿ ರಸ್ತೆಯಲ್ಲಿ ತರಕಾರಿ ಮಾರುವುದನ್ನು ತಡೆಯಬೇಕು ಎಂದು ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಎಲ್ಲಾ ಸದಸ್ಯರು ಸಂಬಂಧಪಟ್ಟ ಅಧಿಕಾರಿಗಳು ಸೇರಿ ಕ್ರಮಕೈಗೊಳ್ಳಬೇಕು ಎಂದು ಅಭಿಪ್ರಾಯಿಸಿದರು. | - |
| 11. | ಸದಸ್ಯರು ರವರು ಡಾ॥ ಶಶಿಕುಮಾರ್ ರವರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿರುವ ಸೌಲಭ್ಯಗಳನ್ನು ತಿಳಿಸುವಂತೆ ಕೋರಿದರು. ಇದಕ್ಕೆ ಕಾರ್ಯದರ್ಶಿಗಳು ಸೌಲಭ್ಯಗಳ ಪಟ್ಟಿಮಾಡಿ ನೀಡುವಂತೆ ಕೋರಿದರು. | ಪ್ರಾಥಮಿಕ ಆರೋಗ್ಯ ಕೇಂದ್ರ |
| 12. | ಶ್ರೀ ನಾಗೇಂದ್ರ ಸದಸ್ಯರು ರವರು ಅಶೋಕಪುರಂ ಮತ್ತು ಗೌತಮನಗರದಲ್ಲಿರುವ ಆರೋಗ್ಯ ಕೇಂದ್ರಗಳಿಗೆ ಎನ್.ಜಿ.ಓ ವತಿಯಿಂದ ಡಾಕ್ಟರ್‌ಗಳ ವ್ಯವಸ್ಥೆಯನ್ನು ಕಲ್ಪಿಸಲು ಅವಕಾಸವಿದ್ದಲ್ಲಿ ತಿಳಿಸಲು ಕೋರಿದರು. ಇದಕ್ಕೆ ಡಾ॥ ಶಶಿಕುಮಾರ್ ರವರು ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ ಮುಂದಿನ ಸಭೆಯಲ್ಲಿ ತಿಳಿಸುತ್ತೇನೆ ಎಂದು ತಿಳಿಸಿದರು. | ಪ್ರಾಥಮಿಕ ಆರೋಗ್ಯ ಕೇಂದ್ರ |
| 13. | ಶ್ರೀ ನಾಗೇಂದ್ರ ಸದಸ್ಯರು ರವರು ಮಳೆಗಾಲ ಶುರುವಾಗುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ದುಸ್ಥಿತಿಯಲ್ಲಿರುವ ಚರಂಡಿಗಳನ್ನು ದುರಸ್ಥಿ ಮಾಡಿಸಲು ಕೋರಿದರು. ಇದಕ್ಕೆ ವಾರ್ಡ್ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಚರಂಡಿಗಳು ಸುಸ್ಥಿತಿಯಲ್ಲಿರುತ್ತವೆ. ಎಲ್ಲಾದರು ಚರಂಡಿ ಹಾಳಗಿರುವುದು ಕಂಡುಬಂದರೆ ಮಾಹಿತಿ ತಿಳಿಸಲು ಕೋರಿದರು. | - |
| 14. | ಶ್ರೀ ಜಯಪಾಲ್ ಸದಸ್ಯರು ರವರು ಗೌತಮನಗರ ವ್ಯಾಪಿಯಲ್ಲಿ 5 ಸ್ಯಾನಿಟರಿ ಲೈನ್ ಬದಲಾಯಿಸಲು ಕೋರಲಾಗಿತ್ತು, 5 ರಲ್ಲಿ 2 ಲೈನ್ ಮಾತ್ರ ಬದಲಾಯಿಸಿರುತ್ತಾರೆ. ಎಂದು ತಿಳಿಸಿದರು. ಇನ್ನು ಉಳಿಕೆ 3 ಸ್ಯಾನಿಟರಿ ಲೈನ್ ಬದಲಾಯಿಸಿ ಕೊಡಲು ಕೋರಿದರು. ಆದರೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಅಧಿಕಾರಿಗಳು ಸಭೆಗೆ ಹಾಜರಿರಲಿಲ್ಲ. | - |
| 15. | ಯಶವಂತಪುರ ಸಂಚಾರಿ ಪೋಲೀಸ್ ಠಾಣೆ ಅನಾಮಿಕರ ವಾಹನಗಳನ್ನು ತೆರವುಗೊಳಿಸುವದರ ಬಗ್ಗೆ ಮಾಹಿತಿ ಕೋರಿದರು. | ಯಶವಂತಪುರ ಸಂಚಾರಿ ಪೋಲೀಸ್ ಠಾಣೆ |
| 16. | ಶ್ರೀ ನಾಗೇಂದ್ರ ಸದಸ್ಯರು ರವರು ಕಿರ್ಲೋಸ್ಕರ್ ಫೌಂಡರಿ ಹತ್ತಿರ ಟಯೋಟ ಶೋ ರೂಂ ರವರು ಸರ್ವೀಸ್‌ಗೆ ಬಂದ ವಾಹನಗಳನ್ನು ರಸ್ತೆಯಲ್ಲಿ ನಿಲ್ಲಿಸುತ್ತಿರುತ್ತಾರೆ ಇದರಿಂದ ವಾಹನಗಳ ಸಂಚಾರಕ್ಕೆ ಹಾಗೂ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿರುತ್ತದೆ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದು ತಿಳಿಸಿದರು. | ಸಂಚಾರಿ ಇಲಾಖೆ |
| 17. | ಶ್ರೀ ವೈ.ಆರ್ ವೆಂಕಟೇಶ್ ಸದಸ್ಯರು ರವರು ಅನ್ನಪೂರ್ಣ ಅಪಾರ್ಟ್‌ಮೆಂಟ್ ಹತ್ತಿರ ಕಸದ ಗಾಡಿಗಳನ್ನು ಮತ್ತೆ ನಿಲ್ಲಿಸಿ ಹೋಗುತ್ತಿರುತ್ತಾರೆ ಎಂದು ತಿಳಿಸಿದರು. ಇದಕ್ಕೆ ಕಾರ್ಯದರ್ಶಿಗಳು ಯಶವಂತಪುರ ಸಂಚಾರಿ ಪೋಲೀಸ್ ಠಾಣೆಯ ಅಧಿಕಾರಿಗಳು ಕ್ರಮಕೈಗೊಳ್ಳಲು ಸೂಚಿಸಿದರು. | ಯಶವಂತಪುರ ಸಂಚಾರಿ ಪೋಲೀಸ್ ಠಾಣೆ |
| 18. | ಶ್ರೀ ಪುಟ್ಟಸ್ವಾಮಿ ಸದಸ್ಯರು ರವರು ಅಂತಿಮವಾಗಿ ಸಭೆಗೆ ಹಾಜರಿದ್ದ ಸದಸ್ಯರು, ಅಧಿಕಾರಿಗಳು ಮತ್ತು ಸಾರ್ವಜನಿಕರಿಗೆ ವಂದನೆಗಳು ಹೇಳುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು. | - |

ಕಾರ್ಯದರ್ಶಿ

7/5/22

ವಾರ್ಡ್ ಕಮಿಟಿ, ವಾರ್ಡ್.ಸಂಖ್ಯೆ.44
ಮಾರಪ್ಪನಪಾಳ್ಯ

Scanned with CamScanner